Akashvani : Bangalore
Regional Bulletin In Kannada
27.01.2025 / 14.30 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಮುಡಾ ಪ್ರಕರಣ; ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ನಿ ಹಾಗೂ ಸಚಿವ ಬಿ.ಸುರೇಶ್‌ಗೆ ಇಡಿ ನೋಟಿಸ್
- ಮುಡಾ ಹಗರಣ; ಉಚ್ಚ ನ್ಯಾಯಾಲಯದ ಧಾರವಾಡ ಪೀಠಕ್ಕೆ ಲೋಕಾಯುಕ್ತ ಪೊಲೀಸರಿಂದ ವರದಿ ಸಲ್ಲಿಕೆ
- ಸಣ್ಣ ಹಣಕಾಸು ಸಂಸ್ಥೆಗಳಿಗೆ ಕಡಿವಾಣ ಹಾಕುವಂತೆ ಸಚಿವ ಕೃಷ್ಣಭೈರೇಗೌಡ ಜಿಲ್ಲಾಧಿಕಾರಿಗಳಿಗೆ ಸೂಚನೆ
- ನಟ ಶಿವರಾಜ್‌ಕುಮಾರ್ ಆರೋಗ್ಯ ವಿಚಾರಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ

<><*<><>*><>

ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ನಿ ಪಾರ್ವತಿ ಹಾಗೂ ಸಚಿವ ಬಿ.ಸುರೇಶ್ ಗೆ ಇಡಿ ಅಧಿಕಾರಿಗಳು ನೋಟಿಸ್ ನೀಡಿದ್ದಾರೆ. ಜನವರಿ ೨೩ ರಂದು ನೋಟಿಸ್ ಜಾರಿ ಮಾಡಿದ್ದ ಜಾರಿನಿರ್ದೇಶನಾಲಯದ ಅಧಿಕಾರಿಗಳು ಇಂದು ವಿಚಾರಣೆಗೆ ಹಾಜರಾಗುವಂತೆ ಸೂಚಿಸಿದ್ದರು. ಇಡಿ ನೋಟಿಸ್ ನೀಡಿದ್ದನ್ನು ಪ್ರಶ್ನಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ನಿ ಹಾಗೂ ಸಚಿವ ಸುರೇಶ್ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ. ಈ ಕುರಿತಂತೆ ಬೆಂಗಳೂರಿನಲ್ಲಿ ಪ್ರತಿಕ್ರಿಯಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಇಡಿ ಅಧಿಕಾರಿಗಳು ನೋಟಿಸ್ ನೀಡಿರುವುದು ನಿಜ ಎಂದು ಸ್ಪಷ್ಟಪಡಿಸಿದ್ದಾರೆ. ಇನ್ನೊಂದೆಡೆ ಮುಡಾ ಪ್ರಕರಣದಲ್ಲಿ ತನಿಖೆ ನಡೆಸಿರುವ ಲೋಕಾಯುಕ್ತ ಪೊಲೀಸರು, ಇಂದು ಧಾರವಾಡ ಹೈಕೋರ್ಟ್ ಪೀಠಕ್ಕೆ ತನಿಖಾ ವರದಿ ಸಲ್ಲಿಸಿದ್ದಾರೆ ಎಂದು ಐಎಎನ್‌ಎಸ್ ಸುದ್ದಿಸಂಸ್ಥೆ ವರದಿ ಮಾಡಿದೆ. ಮೈಸೂರು ಲೋಕಾಯುಕ್ತ ಪೊಲೀಸ್ ವರಿಷ್ಠಾಧಿಕಾರಿ ಟಿ.ಜೆ.ಉದೇಶ್ ಮುಚ್ಚಿದ ಲಕೋಟೆಯಲ್ಲಿ ವರದಿಯನ್ನು ನ್ಯಾಯಲಯಕ್ಕೆ ಸಲ್ಲಿಸಿದ್ದಾರೆ.

<><*<><>*><>

ರಾಜಕೀಯ ಪಿತೂರಿಯಿಂದ ಮುಖ್ಯಮಂತ್ರಿ ಪತ್ನಿ ಹಾಗೂ ಸಚಿವ ಭೈರತಿ ಸುರೇಶ್ ಅವರಿಗೆ ಇಡಿ ನೋಟಿಸ್ ನೀಡಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಒಂದು ಪ್ರಕರಣವನ್ನು ಒಂದೇ ಸಮಯದಲ್ಲಿ ಎರಡು ತನಿಕಾ ಸಂಸ್ಥೆಗಳು ವಿಚಾರಣೆ ನಡೆಸಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ. ಇದೇ ವೇಳೆ ಮುಖ್ಯಮಂತ್ರಿ ಹುದ್ದೆ ವಿಚಾರವಾಗಿ ಪ್ರತಿಕ್ರಿಯಿಸಿ, ಸರ್ಕಾರ ಸುಭದ್ರವಾಗಿದ್ದು, ನಾವೆಲ್ಲರೂ ಮುಖ್ಯಮಂತ್ರಿಯವರ ಜೊತೆ ಕೆಲಸ ಮಾಡುತ್ತಿರುವುದಾಗಿ ಸ್ಪಷ್ಟಪಡಿಸಿದರು.

<><*<><>*><>

ಮುಡಾ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ರಾಜೀನಾಮೆ ನೀಡುವಂತೆ ಪರಿಷತ್ ಸದಸ್ಯ ಸಿ.ಟಿ.ರವಿ ಆಗ್ರಹಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಿಷ್ಪಕ್ಷಪಾತ ತನಿಖೆಯಿಂದ ಮಾತ್ರ ಸತ್ಯಾಂಶ ಹೊರಬರಲಿದೆ. ತಪ್ಪು ಮಾಡಿದವರಿಗೆ ಶಿಕ್ಷೆ ಆಗಲೇಬೇಕು ಎಂದು ಒತ್ತಾಯಿಸಿದ್ದಾರೆ.

<><*<><>*><>

ಸಣ್ಣಹಣಕಾಸು ಸಂಸ್ಥೆಗಳ ಮಿತಿ ಮೀರಿದ ವರ್ತನೆಗೆ ಕಡಿವಾಣ ಹಾಕುವ ಕುರಿತಂತೆ ಕಂದಾಯ ಸಚಿವ ಕೃಷ್ಣ ಬೈರೇಗೌಡ, ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಜೊತೆ ಇಂದು ಸಭೆ ನಡೆಸಿದರು. ವಿಕಾಸ ಸೌಧದಲ್ಲಿ ನಡೆದ ಸಭೆಯಲ್ಲಿ ಸಣ್ಣಹಣಕಾಸು ಸಂಸ್ಥೆಗಳ ಹಾವಳಿ ತಡೆಗೆ ಸೂಕ್ತ ಕ್ರಮ ಕೈಗೊಳ್ಳುವ ನಿಟ್ಟಿನಲ್ಲಿ ಸಮಾಲೋಚನೆ ನಡೆಸಿದರು. ಬಡವರಿಗೆ ಕಿರುಕುಳ ನೀಡುತ್ತಿರುವ ಸಣ್ಣ ಹಣಕಾಸು ಸಂಸ್ಥೆಗಳಿಗೆ ಕಡಿವಾಣ ಹಾಕಲು ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದ್ದಾರೆ. ಇದೇ ವೇಳೆ ಬಗರ್ ಹುಕುಂ, ಪೋಡಿ ದುರಸ್ತಿ ಮತ್ತು ಪೌತಿ ಖಾತೆ ಆಂದೋಲನ ಪ್ರಗತಿಯ ಕುರಿತು ಪರಿಶೀಲನೆ ನಡೆಸಿದರು. ರಾಜ್ಯದಲ್ಲಿ ರೈತರಿಗೆ ಸಮಸ್ಯೆಯಾಗದಂತೆ ಕಂದಾಯ ಇಲಾಖೆಯ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು. ಕಂದಾಯ ಇಲಾಖೆಯೊಂದಿಗೆ ಸಂಬಂಧಪಟ್ಟ ಇತರ ಇಲಾಖೆಯ ಅಧಿಕಾರಿಗಳ ಸಹಕಾರವು ಅಗತ್ಯವಿದೆ ಎಂದು ಸ್ಪಷ್ಟಪಡಿಸಿದರು.

<><*<><>*><>

ಸಣ್ಣ ಹಣಕಾಸು ಸಂಸ್ಥೆಗಳು ಸಾಲ ವಸೂಲಾತಿ ನೆಪದಲ್ಲಿ ಗ್ರಾಹಕರ ಮೇಲೆ ದೌರ್ಜನ್ಯ ನಡೆಸುವಂತಿಲ್ಲ ಎಂದು ಹಾವೇರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಂಶುಕುಮಾರ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಿಯಮ ಮೀರಿ ಸಾಲ ವಸೂಲಾತಿಗಾಗಿ ಗ್ರಾಹಕರ ಮೇಲೆ ದೌರ್ಜನ್ಯ ಎಸಗಿದ್ದ ಕೃತ್ಯಕ್ಕೆ ಸಂಬಂಧಪಟ್ಟಂತೆ ಜಿಲ್ಲೆಯಲ್ಲಿ ಈವರೆಗೆ ೧೩ ಪ್ರಕರಣ ದಾಖಲಾಗಿದೆ ಎಂದು ಹೇಳಿದ್ದಾರೆ. ಸಾಲ ವಸೂಲಿ ಮಾಡುವವರು, ನಿಂದನೀಯ ಭಾಷೆ ಬಳಸಬಾರದು. ಗ್ರಾಹಕರೊಂದಿಗೆ ಸೌಜನ್ಯದಿಂದ ವರ್ತಿಸಬೇಕು. ಕಾನೂನು ಪ್ರಕಾರ ಸಾಲ ವಸೂಲಿ ಮಾಡಬೇಕು ಎಂದು ತಿಳಿಸಿದ್ದಾರೆ. ಸಾಲಗಾರರ ಮೇಲೆ ದೌರ್ಜನ್ಯ ನಡೆಸಿದರೆ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

<><*<><>*><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ನಟ ಶಿವರಾಜ್ ಕುಮಾರ್ ಅವರ ನಾಗವಾರದಲ್ಲಿನ ನಿವಾಸಕ್ಕೆ ಭೇಟಿ ನೀಡಿ ಆರೋಗ್ಯ ವಿಚಾರಿಸಿದರು. ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶಸ್ತ್ರ ಚಿಕಿತ್ಸೆಯ ಮರುದಿನವೇ ಶಿವರಾಜ್‌ಕುಮಾರ್ ಅವರಿಗೆ ಕರೆ ಮಾಡಿ ಆರೋಗ್ಯ ವಿಚಾರಿಸಲಾಗಿತ್ತು ಎಂದು ತಿಳಿಸಿದ್ದಾರೆ. ಮುಂದಿನ ತಿಂಗಳಿನಿಂದ ಶಿವರಾಜ್‌ಕುಮಾರ್ ಚಿತ್ರೀಕರಣದಲ್ಲಿ ಭಾಗವಹಿಸುವುದಾಗಿ ತಿಳಿಸಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

<><*<><>*><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ನಟ ಶಿವರಾಜ್ ಕುಮಾರ್ ಅವರ ನಾಗವಾರದಲ್ಲಿನ ನಿವಾಸಕ್ಕೆ ಭೇಟಿ ನೀಡಿ ಆರೋಗ್ಯ ವಿಚಾರಿಸಿದರು. ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು,

ಶಸ್ತ್ರ ಚಿಕಿತ್ಸೆಯ ಮರುದಿನವೇ ಶಿವರಾಜ್‌ಕುಮಾರ್ ಅವರಿಗೆ ಕರೆ ಮಾಡಿ ಆರೋಗ್ಯ ವಿಚಾರಿಸಲಾಗಿತ್ತು ಎಂದು ತಿಳಿಸಿದ್ದಾರೆ. ಮುಂದಿನ ತಿಂಗಳಿನಿಂದ ಶಿವರಾಜ್‌ಕುಮಾರ್ ಚಿತ್ರೀಕರಣದಲ್ಲಿ ಭಾಗವಹಿಸುವುದಾಗಿ ತಿಳಿಸಿದ್ದಾರೆ ಎಂದು ಹೇಳಿದ್ದಾರೆ.

<><*<><>*><>

ಬೆಂಗಳೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯು ೨೦೨೫ರ ನೂತನ ವರ್ಷದ ಕ್ಯಾಲೆಂಡರ್ ಅನ್ನು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇಂದು ಬಿಡುಗಡೆಗೊಳಿಸಿದರು. ವಜ್ರಮಹೋತ್ಸವದ ಸಂಭ್ರಮದಲ್ಲಿರುವ ಬೆಂಗಳೂರು ಜಲಮಂಡಳಿಯು 'ಸಾರ್ಥಕ ೬೦ ಸಾಧನೆ ಮತ್ತಷ್ಟು' ಎಂಬ ಘೋಷವಾಕ್ಯದೊಂದಿಗೆ ಕ್ಯಾಲೆಂಡರ್ ಹೊರತಂದಿದೆ. ಕ್ಯಾಲೆಂಡರ್ ನಲ್ಲಿ ಬೆಂಗಳೂರಿಗೆ ೧೮೯೬ರಿಂದ ಹೆಸರಘಟ್ಟದಿಂದ ಹಾಗೂ ೧೯೩೩ರ ತಿಪ್ಪಗೊಂಡನಹಳ್ಳಿಯಿಂದ ನೀರು ಸರಬರಾಜು ಮಾಡುತ್ತಿರುವ ಅಪರೂಪದ ಚಿತ್ರಗಳು, ೧೯೬೪ರಲ್ಲಿ ಜಲಮಂಡಳಿ ಸ್ಥಾಪನೆ, ಕಾವೇರಿ ನದಿಯಿಂದ ಬೆಂಗಳೂರಿಗೆ ನೀರು ಪೂರೈಸುವ ಮೊದಲ ಹಂತದ ಯೋಜನೆಯಿಂದ ಹಿಡಿದು ಐದನೇ ಹಂತದ ಯೋಜನೆಯವರೆಗೆ, ಮಳೆ ನೀರು ಸುಗ್ಗಿ ಕೇಂದ್ರ, ತ್ಯಾಜ್ಯ ನೀರು ಸಂಸ್ಕರಣಾ ಘಟಕಗಳು ಅಪರೂಪದ, ಅತ್ಯಾಕರ್ಷಕ ಚಿತ್ರಗಳನ್ನು ಕ್ಯಾಲೆಂಡರ್ ಒಳಗೊಂಡಿದೆ. ಬೆಂಗಳೂರಿಗೆ ಸಮರ್ಪಕ ನೀರು ಸರಬರಾಜು ಮಾಡುವ ನಿಟ್ಟಿನಲ್ಲಿ ಇದುವರೆಗೆ ಕೈಗೊಂಡಿರುವ ಕ್ರಮಗಳನ್ನು ಕ್ಯಾಲೆಂಡರ್‌ನಲ್ಲಿ ವಿವರಿಸಲಾಗಿದೆ.

<><*<><>*><>

ಕೇಂದ್ರ ಸರ್ಕಾರದ ಈ ಬಾರಿಯ ಆಯವ್ಯಯದ ಮೇಲೆ ರೈತಾಪಿ ವರ್ಗ ಬಹಳ ನಿರೀಕ್ಷೆ ಇಟ್ಟುಕೊಂಡಿದ್ದು, ರೈತರ ಕಲ್ಯಾಣಕ್ಕೆ ಪೂರಕ ಬಜೆಟ್ ಮಂಡನೆಯಾಗಬೇಕೆಂದು ರೈತ ಮುಖಂಡ ಹಾಗೂ ರಾಜ್ಯ ಕಬ್ಬು ಬೆಳೆಗಾರರ ಸಂಘದ ರಾಜ್ಯಾಧ್ಯಕ್ಷ ಕುರುಬೂರು ಶಾಂತಕುಮಾರ್ ತಿಳಿಸಿದ್ದಾರೆ. ಕೇಂದ್ರ ಬಜೆಟ್ ಕುರಿತು ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಈ ಬಾರಿಯ ಕೇಂದ್ರ ಆಯವ್ಯಯದ ಬಗ್ಗೆ ಕಾತುರದಿಂದ ಕಾಯುತ್ತಿದ್ದೇವೆ ಎಂದು ಹೇಳಿದ್ದಾರೆ.

ಧ್ವನಿ: ಕುರುಬೂರು ಶಾಂತಕುಮಾರ್

<><*<><>*><>

ಕಲಬುರಗಿ ಮೂಲದ ಖ್ಯಾತ ಕ್ಯಾನ್ಸರ್ ತಜ್ಞೆ ಡಾ.ವಿಜಯಲಕ್ಷ್ಮಿ ದೇಶಮಾನೆ ದೇಶದ ಪ್ರತಿಷ್ಠಿತ ಪದ್ಮ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಮೂಲತಃ ಕಲಬುರಗಿಯವರಾದ ಇವರು ಬೆಂಗಳೂರಿನ ಕಿದ್ವಾಯಿ ನಿರ್ದೇಶಕರಾಗಿಯೂ ಸೇವೆ ಸಲ್ಲಿಸಿದ್ದಾರೆ. ಕಿದ್ವಾಯಿ ಸ್ಮಾರಕ ಕ್ಯಾನ್ಸರ್ ಸಂಸ್ಥೆಯ ಶಸ್ತ್ರಚಿಕಿತ್ಸಾ ವಿಭಾಗದ ಪ್ರಾಧ್ಯಾಪಕಿ, ಮುಖ್ಯಸ್ಥೆ, ಸಂಸ್ಥೆಯ ನಿರ್ದೇಶಕಿಯಾಗಿ ಅನನ್ಯ ಸೇವೆ ಸಲ್ಲಿಸಿರುವ ಜೊತೆಗೆ ಹತ್ತಾರು ಪ್ರಬಂಧಗಳ ಮಂಡನೆ ಮತ್ತು ಸ್ತನ ಕ್ಯಾನ್ಸರ್ ಕುರಿತು ಗ್ರಾಮೀಣ ಭಾಗದಲ್ಲಿ ಜಾಗೃತಿ ಅಭಿಯಾನ ನಡೆಸಿದ್ದಾರೆ. ಪ್ರಶಸ್ತಿ ಬಗ್ಗೆ ಆಕಾಶವಾಣಿ ಜೊತೆ ಡಾ.ವಿಜಯಲಕ್ಷ್ಮಿ ದೇಶಮಾನೆ ಸಂತಸ ಹಂಚಿಕೊಂಡಿದ್ದಾರೆ.

ಧ್ವನಿ ವಿಜಯಲಕ್ಷ್ಮಿ ದೇಶಮಾನೆ

<><*<><>*><>

ಗಣರಾಜ್ಯೋತ್ಸವ ದಿನಾಚರಣೆ ಪ್ರಯುಕ್ತ ಬೆಂಗಳೂರಿನ ಸಸ್ಯಕಾಶಿ ಲಾಲ್‌ಬಾಗ್‌ನಲ್ಲಿ ನಡೆದ ಫಲಪುಷ್ಪ ಪ್ರದರ್ಶನ ಇಂದು ಮುಕ್ತಾಯಗೊಂಡಿದೆ. ಆದಿಕವಿ ಮಹರ್ಷಿ ವಾಲ್ಮೀಕಿ ಪರಿಕಲ್ಪನೆ ಆಧಾರಿತ ಲಾಲ್‌ಬಾಗ್‌ನ ಫಲಪುಷ್ಪ ಪ್ರದರ್ಶನಕ್ಕೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ನಿನ್ನೆ ಒಂದೇ ದಿನ ೧ ಲಕ್ಷದ ೧೭ ಸಾವಿರ ಪ್ರವಾಸಿಗರು ಪುಷ್ಪ ಪ್ರದರ್ಶನವನ್ನು ವೀಕ್ಷಿಸಿದ್ದಾರೆ ಎಂದು ತೋಟಗಾರಿಕೆ ಇಲಾಖೆ ಪ್ರಕಟಿಸಿದೆ. ೧೧ ದಿನಗಳಿಂದ ೪ ಲಕ್ಷದ ೩೮ ಸಾವಿರಕ್ಕೂ ಹೆಚ್ಚು ಜನರು ಫಲಪುಷ್ಪ ಪ್ರದರ್ಶನವನ್ನು ವೀಕ್ಷಿಸಿದ್ದಾರೆ. ಮಕ್ಕಳು, ವಿದ್ಯಾರ್ಥಿಗಳು ಸೇರಿದಂತೆ ೧ ಲಕ್ಷ ೧೭ ಸಾವಿರದ ೬೧ ಮಂದಿ ವೀಕ್ಷಣೆ ಮಾಡಿದ್ದು, ೬೫ ಲಕ್ಷ ರೂಪಾಯಿಯಷ್ಟು ಮೊತ್ತ ಸಂಗ್ರಹವಾಗಿದೆ. ಆದಿಕವಿ ಮಹರ್ಷಿ ವಾಲ್ಮೀಕಿ ವಿಷಯಾಧಾರಿತ ರಾಮಾಯಣದ ಕೆಲ ಸನ್ನಿವೇಶಗಳು ಹೂವುಗಳಲ್ಲಿ ಅರಳಿತ್ತು. ಪ್ರದರ್ಶನದಲ್ಲಿ ೩ ಲಕ್ಷಕ್ಕೂ ಹೆಚ್ಚು ಹೂವುಗಳನ್ನು ಬಳಕೆ ಮಾಡಲಾಗಿದ್ದು, ವಿವಿಧ ಸನ್ನಿವೇಶಗಳನ್ನು ಹೂವುಗಳಿಂದ ಸೃಷ್ಟಿಸಲಾಗಿತ್ತು.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>